ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಇತ್ತೀಚೆಗೆ ಪ್ರವಾಹ ಉಂಟಾದ ಕುರಿತು

ಶ್ರೀ ಸಿ. ಪಿ. ಯೋಗೇಶ್ವರ್(ನಾಮನಿರ್ದೇಶನ ಹೊಂದಿದವರು ) -

1128 (1267) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಇತ್ತೀಚೆಗೆ ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉಂಟಾದ ಜಲ ಪ್ರಳಯದಲ್ಲಿ ಒಟ್ಟು ಎಷ್ಟು ಮನೆಗಳು ಪೂರ್ಣ ಪ್ರಮಾಣದಲ್ಲಿ ನಾಶ ಹೊಂದಿರುತ್ತವೆ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪೂರ್ಣ ಪ್ರಮಾಣದಲ್ಲಿ ಮನೆ ಕಳೆದುಕೊಂಡವರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು;

(ಇ) ಪರಿಹಾರ ನೀಡಲು ಬಾಕಿ ಇರುವವರ ಸಂಖ್ಯೆ ಎಷ್ಟು; ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಎಷ್ಟು ಮನೆಗಳು ಭಾಗಶಃ ನಾಶವಾಗಿವೆ; ಈ ಪೈಕಿ ಎಷ್ಟು ಜನರಿಗೆ ಪರಿಹಾರ ನೀಡಲಾಗುವುದು; ಭಾಗಶಃ ಮನೆ ಕಳೆದುಕೊಂಡವರಿಗೆ ನೀಡಿದ ಪರಿಹಾರ ಮೊತ್ತವೆಷ್ಟು;

(ಉ) ಭೂಕುಸಿತದಿಂದ ಎಷ್ಟು ಎಕರೆ ರೈತರ ಭೂಮಿ ನಾಶವಾಗಿದೆ; ಭೂಮಿ ಕಳೆದುಕೊಂಡ ರೈತರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು; ಬದಲಿ ಭೂಮಿ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಊ) ಈ ಜಲ ಪ್ರಳಯಕ್ಕೆ ದಾನಿಗಳಿಂದ ಮತ್ತು ಸಂಘ ಸಂಸ್ಥೆಗಳಿಂದ ಬಂದ ದೇಣಿಗೆ ಎಷ್ಟು; ಇದನ್ನು ಯಾವ ಯಾವ ಉದ್ದೇಶಕ್ಕೆ ಬಳಸಿಕೊಳ್ಳಲಾಗಿದೆ; ಜಲ ಪ್ರಳಯದಿಂದ ರಸ್ತೆ, ಸೇತುವೆ, ಸಾರ್ವಜನಿಕ ಕಟ್ಟಡಗಳಿಗೆ ಆಗಿರುವ ಒಟ್ಟು ನಷ್ಟದ ಮೊತ್ತವೆಷ್ಟು? (ವಿವರ ನೀಡುವುದು)